PW-3 ಜಯಣ್ಣ

Date:26.06.2025

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ 23 ರಿಂದ 26 ನೇ ಪ್ರತಿವಾದಿ ಪರ ಶ್ರೀ ಟಿ ಟಿ ಎಸ್ ವಕೀಲರಿಂದಃ**

ನನ್ನ ಮುತ್ತತಾತನ ಹೆಸರು ನನಗೆ ಗೊತ್ತಿಲ್ಲ. ನನಗೆ ಬುಡ್ನಹಟ್ಟಿಯಲ್ಲಿ ನನಗೆ ಸೇರಿದ ಮನೆ ಇದೆ. ನನ್ನ ಮನೆಯ ಖಾತಾ ನಂಬರ್ ನನಗೆ ಹೇಳಲಾಗುವುದಿಲ್ಲ. ನನ್ನ ಮನೆಯ ಪಕ್ಕದಲ್ಲಿ ಕಮಲಮ್ಮ ಮತ್ತು ತಿಪ್ಪಯ್ಯ ರವರು ವಾಸವಾಗಿದ್ದಾರೆ. ಅವರ ಮುತ್ತತಾತನ ಹೆಸರು ಕೂಡ ನನಗೆ ಗೊತ್ತಿಲ್ಲ. ಕ್ಯಾಸಯ್ಯ ರವರು ಪ್ರಸ್ತುತ ದಾವೆಯನ್ನು ಹೂಡಿರುತ್ತಾರೆ. ಜಮೀನು ಖರೀದಿ ಮಾಡಿದವರ ವಿರುದ್ಧ ದಾವೆಯನ್ನು ಹೂಡಿದ್ದಾರೆ, ಆದರೆ ನನಗೆ ಅವರ ಹೆಸರು ಗೊತ್ತಿಲ್ಲ. ನಸೀರುದ್ದೀನ್, ಗೋಪಾಲ್, ರಾಮು ಮತ್ತು ಭಕ್ತವತ್ಸಲ ಶೆಟ್ಟಿ ರವರು ಜಮೀನನ್ನು ಖರೀದಿ ಮಾಡಿದ್ದಾರೆ ಎಂದರೆ ನನಗೆ ಗೊತ್ತಿಲ್ಲ. ಜಮೀನನ್ನು ಯಾರು ಯಾರು ಖರೀದಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ಜಮೀನನ್ನು ಯಾರು ಮಾರಾಟ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ಯಾವಾಗ ಜಮೀನು ಮಾರಾಟ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ಸದರಿ ಜಮೀನನ್ನು ನಾನು ನೋಡಿದ್ದೇನೆ. ಜಮೀನು ಖರೀದಿದಾರರೆ ಸದರಿ ಜಮೀನಿನಲ್ಲಿ ವ್ಯವಸಾಯ ಮಾಡುತ್ತಿದ್ದಾರೆ ಎಂದರೆ ನನಗೆ ಗೊತ್ತಿಲ್ಲ. ಕ್ಯಾಸಯ್ಯ ರವರ ಮುತ್ತತಾತನ ಹೆಸರು ನನಗೆ ಗೊತ್ತಿಲ್ಲ. ಸದರಿ ಕ್ಯಾಸಯ್ಯ ನನ್ನ ಸಂಬಂದಿಯಲ್ಲ. ಸದರಿ ಜಮೀನಿನಲ್ಲಿ ಒಂದು ಇಟ್ಟಿಗೆ ಭಟ್ಟಿ ಇದೆ ಎಂದರೆ ನನಗೆ ಗೊತ್ತಿಲ್ಲ. ಜಮೀನಿಗೆ ಸಂಬಂದಿಸಿದ ದಾಖಲಾತಿಗಳನ್ನು ನಾನು ನೋಡಿರುವುದಿಲ್ಲ. ನಾನು ನ್ಯಾಯಾಲಯಕ್ಕೆ ಸಲ್ಲಿಸಿದ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ನನಗೆ ಗೊತ್ತಿಲ್ಲ ಎಂದರೆ ಸರಿ. ಈಗಲೂ ಕೂಡ ಮೇಲೆ ಹೇಳಿದ ಖರೀದಿದಾರರು ದಾವಾ ಸ್ವತ್ತಿನ ಸ್ವಾದೀನದಲ್ಲಿ ಇದ್ದಾರೆ ಎಂದರೆ ಸರಿಯಲ್ಲ. ನಾನು ಕ್ಯಾಸಯ್ಯ ರವರ ಮಾತು ಕೇಳಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ನ್ಯಾಯಾಲಯಕ್ಕೆ ಸುಳ್ಳು ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು).

ಓ.ಹೇ.ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು

ಜೆ.ಎಂ.ಎಫ್.ಸಿ., ಚಳ್ಳಕೆರೆ